All India Radio: Bangalore
National Bulletin In Kannada
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

16.03.2026 13.10 hrs

<>><><*><><<>

ಮುಖ್ಯಾಂಶಗಳು

- **ರಾಜ್ಯಸಭಾ ಚುನಾವಣೆ ; ೧೦ ರಾಜ್ಯಗಳ ೩೭ ಸ್ಥಾನಗಳಿಗೆ ಇಂದು ಮತದಾನ ಪ್ರಗತಿಯಲ್ಲಿ**
- **ಪರಿಶಿಷ್ಟ ಸಮುದಾಯ ಮತ್ತು ಮಹಿಳೆಯರಿಗೆ ಹೆಚ್ಚಿನ ಪ್ರಯೋಜನ ಒದಗಿಸಲು ಸ್ಟ್ಯಾಂಡಪ್ ಇಂಡಿಯಾ ಯೋಜನೆಗೆ ಮರುರೂಪ - ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್**
- **ಚುನಾವಣಾ ಆಯೋಗದಿಂದ ಪಶ್ಚಿಮ ಬಂಗಾಳದ ಡಿಜಿಪಿ ಸೇರಿದಂತೆ ಹಿರಿಯ ಪೊಲೀಸ್ ಅಧಿಕಾರಿಗಳ ವರ್ಗಾವಣೆ**
- **ದುಬೈ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮೇಲೆ ಡ್ರೋನ್ ದಾಳಿ ವಿಮಾನ ಸೇವೆ ಸ್ಥಗಿತ**
- **ಒಡಿಶಾದ ಆಸ್ಪತ್ರೆಯೊಂದರಲ್ಲಿ ಅಗ್ನಿ ದುರಂತ ; ೧೦ ಮಂದಿ ಸಾವು; ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ ಅವರಿಂದ ಸಂತಾಪ**

<>><><*><><<>

ಸಂಸತ್ತಿನ ಮೇಲ್ಮನೆಯಾದ ರಾಜ್ಯಸಭೆಯ ೧೦ ರಾಜ್ಯಗಳ ೩೭ ಸ್ಥಾನಗಳಿಗೆ ಇಂದು ದ್ವೈವಾರ್ಷಿಕ ಚುನಾವಣೆ ನಡೆಯುತ್ತಿದೆ. ಏಪ್ರಿಲ್ ತಿಂಗಳಲ್ಲಿ ನಿವೃತ್ತರಾಗಲಿರುವ ಸದಸ್ಯರಿಂದ ತೆರವಾಗಲಿರುವ ಈ ಸ್ಥಾನಗಳಿಗಾಗಿ ಇಂದು ಬೆಳಗ್ಗೆ ೯ ಗಂಟೆಯಿಂದ ಮತದಾನ ಪ್ರಕ್ರಿಯೆ ಆರಂಭವಾಗಿದ್ದು, ಸಂಜೆ ೪ ಗಂಟೆಯವರೆಗೆ ಅವಕಾಶವಿರಲಿದೆ. ಮಹಾರಾಷ್ಟ್ರದ ೭, ತಮಿಳುನಾಡಿನ ೫, ಪಶ್ಚಿಮಬಂಗಾಳ ಮತ್ತು ಬಿಹಾರದ ತಲಾ ೫ ಸೇರಿದಂತೆ ಒಟ್ಟು ೧೦ ರಾಜ್ಯಗಳಲ್ಲಿ ಈ ಪ್ರಕ್ರಿಯೆ ನಡೆಯುತ್ತಿದ್ದು, ಸದನದ ಬಲಾಬಲದ ದೃಷ್ಟಿಯಿಂದ ಈ ಚುನಾವಣೆ ಆಡಳಿತಾರೂಢ ಎನ್‌ಡಿಎ ಮತ್ತು ಪ್ರತಿಪಕ್ಷಗಳ ಐಎನ್‌ಡಿಐಎ ಮೈತ್ರಿಕೂಟಕ್ಕೆ ನಿರ್ಣಾಯಕವಾಗಿದೆ. ಬಿಹಾರ, ಒಡಿಶಾ ಮತ್ತು ಹರಿಯಾಣ ರಾಜ್ಯಗಳ ಒಟ್ಟು ೧೧ ರಾಜ್ಯಸಭಾ ಸ್ಥಾನಗಳಿಗಾಗಿ ಇಂದು ಮತದಾನ ನಡೆಯುತ್ತಿದೆ. ಕಳೆದ ತಿಂಗಳು ೧೦ ರಾಜ್ಯಗಳ ಒಟ್ಟು ೩೭ ರಾಜ್ಯಸಭಾ ಸ್ಥಾನಗಳಿಗೆ ದ್ವೈವಾರ್ಷಿಕ ಚುನಾವಣೆಗಾಗಿ ಕೇಂದ್ರ ಚುನಾವಣಾ ಆಯೋಗವು ಅಧಿಸೂಚನೆ ಹೊರಡಿಸಿತ್ತು. ಬಿಹಾರದ ೫ ಸ್ಥಾನಗಳಿಗೆ ಚುನಾವಣೆ ನಡೆಯುತ್ತಿದ್ದು, ಮುಖ್ಯಮಂತ್ರಿ ನಿತೀಶ್ ಕುಮಾರ್ ಮತ್ತು ಕೇಂದ್ರ ಸಚಿವ ರಾಮ್ ನಾಥ್ ಠಾಕೂರ್ ಸೇರಿದಂತೆ ಪ್ರಮುಖರು ಕಣದಲ್ಲಿದ್ದಾರೆ. ಒಡಿಶಾದಲ್ಲಿ ೪ ಸ್ಥಾನಗಳಿಗಾಗಿ ೫ ಅಭ್ಯರ್ಥಿಗಳು ಸ್ಪರ್ಧಿಸುತ್ತಿರುವುದು ಕುತೂಹಲ ಮೂಡಿಸಿದೆ. ಹರಿಯಾಣದ ೨ ಸ್ಥಾನಗಳಿಗೂ ಚುನಾವಣೆ ಪ್ರಕ್ರಿಯೆ ನಡೆಯುತ್ತಿದ್ದು, ಶಾಸಕರು ವಿಧಾನಸಭೆ ಸಂಕೀರ್ಣದಲ್ಲಿ ಮತ ಚಲಾಯಿಸುತ್ತಿದ್ದಾರೆ. ಇಂದು ಸಂಜೆ ೪ ಗಂಟೆಯವರೆಗೆ ಮತದಾನ ನಡೆಯಲಿದ್ದು, ಸಂಜೆ ೫ ಗಂಟೆಯಿಂದ ಮತ ಎಣಿಕೆ ಕಾರ್ಯ ಆರಂಭವಾಗಿ ಇಂದೇ ಫಲಿತಾಂಶ ಹೊರಬೀಳುವ ನಿರೀಕ್ಷೆಯಿದೆ.

<>><><*><><<>

ದೇಶದ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಮತ್ತು ಮಹಿಳಾ ಉದ್ಯಮಿಗಳಿಗೆ ಹೆಚ್ಚಿನ ಆರ್ಥಿಕ ಉತ್ತೇಜನ ನೀಡುವ ಉದ್ದೇಶದಿಂದ ಕೇಂದ್ರ ಸರ್ಕಾರ ಸ್ಟ್ಯಾಂಡಪ್ ಇಂಡಿಯಾ ಯೋಜನೆಯನ್ನು ಹೊಸ ರೂಪದಲ್ಲಿ ಮರು ಜಾರಿಗೆ ತರಲು ಸಿದ್ಧತೆ ನಡೆಸಿದೆ. ಈ ಕುರಿತಂತೆ ಲೋಕಸಭೆಯಲ್ಲಿ ಪೂರಕ ಪ್ರಶ್ನೆಗಳಿಗೆ ಉತ್ತರಿಸಿದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್,

೨೦೧೬ರ ಏಪ್ರಿಲ್‌ನಲ್ಲಿ ಆರಂಭವಾಗಿದ್ದ ಈ ಯೋಜನೆ ಕಳೆದ ವರ್ಷದ ಮಾರ್ಚ್‌ನಲ್ಲಿ ಅಂತ್ಯಗೊಂಡಿತ್ತು. ಇದೀಗ ನೀತಿ ಆಯೋಗ ಮತ್ತು ವಿವಿಧ ಇಲಾಖೆಗಳು ಯೋಜನೆಯ ಪ್ರಭಾವದ ಬಗ್ಗೆ ಅಧ್ಯಯನ ನಡೆಸಿದ್ದು, ಫಲಾನುಭವಿಗಳಿಗೆ ಮತ್ತಷ್ಟು ಹೆಚ್ಚಿನ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಈ ಯೋಜನೆಯನ್ನು ಮರು ರೂಪಿಸಲಾಗುತ್ತಿದೆ ಎಂದರು. ಪ್ರತಿ ಬ್ಯಾಂಕ್ ಶಾಖೆ, ಪರಿಶಿಷ್ಟ ಸಮುದಾಯದವರಿಗೆ ಹಾಗೂ ಕನಿಷ್ಠ ಒಬ್ಬ ಮಹಿಳೆಗೆ ೧೦ ಲಕ್ಷದಿಂದ ೧ ಕೋಟಿ ರೂಪಾಯಿವರೆಗಿನ ಬ್ಯಾಂಕ್ ಸಾಲ ಸೌಲಭ್ಯ ಒದಗಿಸುವುದು ಈ ಯೋಜನೆಯ ಮುಖ್ಯ ಗುರಿಯಾಗಿದೆ ಎಂದು ತಿಳಿಸಿದ್ದಾರೆ.

<>><><*><><<>

ರಾಜ್ಯಸಭೆಯ ನಾಮನಿರ್ದೇಶಿತ ಸದಸ್ಯರಾದ ರಂಜನ್ ಗೊಗೊಯ್ ಅವರ ಅವಧಿ ಇಂದು ಪೂರ್ಣಗೊಂಡ ಹಿನ್ನೆಲೆಯಲ್ಲಿ, ಮೇಲ್ಮನೆಯು ಅವರಿಗೆ ವಿದಾಯ ಕೋರಿದೆ.  ಇಂದು ಬೆಳಿಗ್ಗೆ ಸದನ ಸಮಾವೇಶಗೊಳ್ಳುತ್ತಿದ್ದಂತೆ ರಾಜ್ಯಸಭಾಪತಿ ಸಿ.ಪಿ. ರಾಧಾಕೃಷ್ಣನ್, ಈ ವಿಷಯವನ್ನು ಪ್ರಕಟಿಸಿದರು. ಭಾರತದ ನಿವೃತ್ತ ಮುಖ್ಯ ನ್ಯಾಯಮೂರ್ತಿಗಳೂ ಆಗಿರುವ ರಂಜನ್ ಗೊಗೊಯ್ ಅವರು ಮಾರ್ಚ್ ೨೦೨೦ರಲ್ಲಿ ಭಾರತದ ರಾಷ್ಟ್ರಪತಿಗಳಿಂದ ರಾಜ್ಯಸಭೆಗೆ ನಾಮನಿರ್ದೇಶನಗೊಳ್ಳುವ ಮೂಲಕ ಸದನದ ಸದಸ್ಯರಾಗಿ ಸೇವೆ ಆರಂಭಿಸಿದ್ದರು.  ವಿದಾಯ ನುಡಿಗಳನ್ನಾಡಿದ ರಾಜ್ಯಸಭಾಪತಿ, ರಂಜನ್ ಗೊಗೊಯ್ ಅವರು ಒಬ್ಬ ನ್ಯಾಯಶಾಸ್ತ್ರಜ್ಞರಾಗಿ ರಾಜ್ಯಸಭೆಯ ಚರ್ಚೆಗಳಲ್ಲಿ ತಮ್ಮ ಅಪ್ರತಿಮ ಕಾನೂನು ಜ್ಞಾನ ಮತ್ತು ಅನುಭವವನ್ನು ಹಂಚಿಕೊಂಡಿದ್ದಾರೆ ಎಂದು ಶ್ಲಾಘಿಸಿದರು. ಸಂಸದೀಯ ಪ್ರಕ್ರಿಯೆ ಮತ್ತು ಸಾರ್ವಜನಿಕ ಹಿತಾಸಕ್ತಿಯ ಬಗ್ಗೆ ಗೊಗೊಯ್ ಅವರು ಸದನದಲ್ಲಿ ವ್ಯಕ್ತಪಡಿಸುತ್ತಿದ್ದ ಅಭಿಪ್ರಾಯಗಳು ಅವರ ಆಳವಾದ ತಿಳುವಳಿಕೆಯನ್ನು ಪ್ರತಿಬಿಂಬಿಸುತ್ತಿದ್ದವು ಎಂದು ಅವರು ಸ್ಮರಿಸಿದರು. ತಮ್ಮ ಸುದೀರ್ಘ ವೃತ್ತಿಜೀವನದುದ್ದಕ್ಕೂ ತೋರಿದ ಸಮರ್ಪಣಾ ಮನೋಭಾವ ಮತ್ತು ಸೇವಾನಿಷ್ಠೆಯೊಂದಿಗೆ ರಂಜನ್ ಗೊಗೊಯ್ ಅವರು ಮುಂದೆಯೂ ವಿವಿಧ ರೀತಿಗಳಲ್ಲಿ ರಾಷ್ಟ್ರ ಸೇವೆ ಮುಂದುವರಿಸಲಿ ಎಂದು ಸಭಾಪತಿಗಳು ಶುಭ ಹಾರೈಸಿದರು.

<>><><*><><<>

ಮುಂಬರುವ ಚುನಾವಣೆಗಳ ಹಿನ್ನೆಲೆಯಲ್ಲಿ ಕೇಂದ್ರ ಚುನಾವಣಾ ಆಯೋಗ ಪಶ್ಚಿಮ ಬಂಗಾಳದ ಕಾನೂನು ಸುವ್ಯವಸ್ಥೆಯಲ್ಲಿ ಪ್ರಮುಖ ಬದಲಾವಣೆಗಳನ್ನು ಮಾಡಿದ್ದು, ರಾಜ್ಯದ ಪೊಲೀಸ್ ಮಹಾ ನಿರ್ದೇಶಕರು, ಕೊಲ್ಕತ್ತಾ ಪೊಲೀಸ್ ಆಯುಕ್ತರು, ಕಾರಾಗೃಹ ಸೇವೆಗಳ ಮಹಾ ನಿರ್ದೇಶಕರು, ಕಾನೂನ ಮತ್ತು ಸುವ್ಯವಸ್ಥೆ ವಿಭಾಗದ ಹೆಚ್ಚುವರಿ ಮಹಾ ನಿರ್ದೇಶಕರು ಸೇರಿದಂತೆ ನಾಲ್ವರು ಹಿರಿಯ ಪೊಲೀಸ್ ಅಧಿಕಾರಿಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ವರ್ಗಾವಣೆಗೊಳಿಸಿದೆ. ೧೯೯೨ ಬ್ಯಾಚ್‌ನ ಐಪಿಎಸ್ ಅಧಿಕಾರಿ ಸಿದ್ಧನಾಥ್ ಗುಪ್ತಾ ಅವರನ್ನು ಪಶ್ಚಿಮ ಬಂಗಾಳದ ನೂತನ ಡಿಜಿಪಿಯಾಗಿ ನೇಮಕ ಮಾಡಲಾಗಿದೆ. ಹಾಗೂ ೧೯೯೬ರ ಬ್ಯಾಚ್‌ನ ಐಪಿಎಸ್ ಅಧಿಕಾರಿ ಅಜಯ್ ಕುಮಾರ್ ನಂದ್ ಅವರನ್ನು ಕೊಲ್ಕತ್ತಾ ಪೊಲೀಸ್ ಆಯುಕ್ತರನ್ನಾಗಿ ನೇಮಕ ಮಾಡಲಾಗಿದೆ.

<>><><*><><<>

ಪಶ್ಚಿಮ ಏಷ್ಯಾದಲ್ಲಿ ಉಲ್ಬಣಿಸಿರುವ ಸಂಘರ್ಷದ ನಡುವೆ ಇಂದು ಮುಂಜಾನೆ ದುಬೈ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಸಮೀಪವಿರುವ ತೈಲ ಸಂಗ್ರಹಣಾ ಘಟಕಗಳ ಮೇಲೆ ಡ್ರೋನ್ ದಾಳಿ ನಡೆದಿದೆ.  ದಾಳಿಯ ಬೆನ್ನಲ್ಲೇ ತೈಲ ಘಟಕಗಳಲ್ಲಿ ಬಾರೀ ಬೆಂಕಿ ಕಾಣಿಸಿಕೊಂಡಿದ್ದು, ಮುನ್ನೆಚ್ಚರಿಕಾ ಕ್ರಮವಾಗಿ ವಿಮಾನ ನಿಲ್ದಾಣದ ಕಾರ್ಯಾಚರಣೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. ಈ ಹಿನ್ನೆಲೆಯಲ್ಲಿ ಏರ್ ಇಂಡಿಯಾ ಮತ್ತು ಏರ್ ಇಂಡಿಯಾ ಎಕ್ಸ್‌ಪ್ರೆಸ್ ಸಂಸ್ಥೆಗಳು ದುಬೈಗೆ ಸಂಚರಿಸಬೇಕಿದ್ದ ತಮ್ಮ ಇಂದಿನ ಎಲ್ಲ ವಿಮಾನಗಳನ್ನು ರದ್ದುಗೊಳಿಸಿವೆ. ಪ್ರಯಾಣಿಕರ ಸುರಕ್ಷತೆ ಮತ್ತು ಅನುಕೂಲತೆಗೆ ತಮ್ಮ ಸಂಸ್ಥೆ ಬದ್ಧವಾಗಿದ್ದು, ಸಂಕಷ್ಟದಲ್ಲಿ ಸಿಲುಕಿರುವ ಪ್ರಯಾಣಿಕರನ್ನು ಶೀಘ್ರದಲ್ಲೇ ಸುರಕ್ಷತವಾಗಿ ಸ್ವದೇಶಕ್ಕೆ ಕರೆ ತರಲು ಎಲ್ಲಾ

ರೀತಿ ಪ್ರಯತ್ನಗಳು ನಡೆಸಲಾಗುತ್ತಿದೆ ಎಂದು ವಿಮಾನಯಾನ ಸಂಸ್ಥೆ ತಿಳಿಸಿದೆ. ದುಬೈಗೆ ಮತ್ತು ಅಲ್ಲಿಂದ ಸಂಚರಿಸಬೇಕಿದ್ದ ವಿಮಾನಗಳು ರದ್ದಾಗಿದ್ದರೂ ಸಹ ಅಬುದಾಬಿ ರಾಸ್ ಅಲ್ ಖೈಮ ಮತ್ತು ಶಾರ್ಜಾ ನಗರಗಳಿಗೆ ಮತ್ತು ನಗರಗಳಿಂದ ಏರ್ ಇಂಡಿಯಾ ಎಕ್ಸ್‌ಪ್ರೆಸ್ ನಡೆಸುವ ತಾತ್ಕಾಲಿಕ ವಿಮಾನ ಕಾರ್ಯಾಚರಣೆಗಳು ಮುಂದುವರೆಯಲಿವೆ.

<>><><*><><<>

ಒಡಿಶಾದ ಕಟಕ್‌ನಲ್ಲಿರುವ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಟ್ರಾಮಾಕೇರ್ ಐಸಿಯು ವಿಭಾಗದಲ್ಲಿ ಇಂದು ಬೆಳಗ್ಗೆ ಸಂಭವಿಸಿದ ಭೀಕರ ಅಗ್ನಿ ಅವಘಡದಲ್ಲಿ ಕನಿಷ್ಠ ೧೦ ಮಂದಿ ಸಾವನಪ್ಪಿದ್ದಾರೆ. ಸುಮಾರು ೧೧ ಮಂದಿ ಆಸ್ಪತ್ರೆ ಸಿಬ್ಬಂದಿಗೆ ರೋಗಿಗಳನ್ನು ರಕ್ಷಿಸುತ್ತಿದ್ದ ವೇಳೆ ಸುಟ್ಟ ಗಾಯಗಳಾಗಿವೆ.  ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ, ಆಸ್ಪತ್ರೆಗೆ ತೆರಳಿ ಪರಿಸ್ಥಿತಿ ಪರಿಶೀಲಿಸಿದರು. ಹಾಗೂ ಮೃತಪಟ್ಟವರ ಕುಟುಂಬಗಳಿಗೆ ತಲಾ ೨೫ ಲಕ್ಷ ರೂಪಾಯಿ ಪರಿಹಾರ ಘೋಷಿಸಲಾಗಿದೆ. ಈ ಘಟನೆ ಕುರಿತು ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹಾಗೂ ಪ್ರಧಾನಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದಾರೆ. ತಮ್ಮ ಸಂದೇಶದಲ್ಲಿ ಪ್ರಧಾನಿ ಈ ಘಟನೆ ಕುರಿತು ಆಗಾಥ ವ್ಯಕ್ತಪಡಿಸಿದ್ದು, ಮೃತಪಟ್ಟವರ ಕುಟುಂಬಗಳಿಗೆ ಸಂತಾಪ ಸೂಚಿಸಿ ಗಾಯಗೊಂಡವರ ಶೀಘ್ರ ಚೇತರಿಕೆಗೆ ಹಾರೈಸಿದ್ದಾರೆ. ಇದರ ಜೊತೆಗೆ ಪ್ರಧಾನಮಂತ್ರಿ ರಾಷ್ಟ್ರೀಯ ವಿಪತ್ತು ನಿಧಿಯಿಂದ ಮೃತಪಟ್ಟವರ ಕುಟುಂಬಗಳಿಗೆ ತಲಾ ೨ ಲಕ್ಷ ರೂಪಾಯಿ ಹಾಗೂ ಗಾಯಗೊಂಡವರಿಗೆ ೫೦ ಸಾವಿರ ರೂಪಾಯಿ ಪರಿಹಾರ ಧನ ಘೋಷಿಸಿದ್ದಾರೆ.

<>><><*><><<>

ಹಾಲಿವುಡ್‌ನ ಪ್ರತಿಷ್ಠಿತ ಆಸ್ಕರ್ ಪ್ರಶಸ್ತಿಯೆಂದೇ ಹೆಸರುವಾಸಿಯಾಗಿರುವ ಅಕಾಡೆಮಿ ಪ್ರಶಸ್ತಿ ಪ್ರದಾನ ಸಮಾರಂಭದ ೯೮ನೇ ಆವೃತ್ತಿ ಅಮೆರಿಕದ ಲಾಸ್ ಎಂಜಲೀಸ್‌ನಲ್ಲಿ ನಡೆದಿದ್ದು, ನಟ ಮೈಕಲ್ ಬಿ. ಜಾರ್ಡನ್ ಅವರು ಸಿನ್ನರ್ಸ್ ಚಿತ್ರದ ಅದ್ಭುತ ನಟನೆಗಾಗಿ ಅತ್ಯುತ್ತಮ ನಟ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದ್ದಾರೆ.  ಅತ್ಯುತ್ತಮ ಚಲನಚಿತ್ರ ಪ್ರಶಸ್ತಿಗೆ ಖ್ಯಾತನಟ ಲಿಯೊನಾರ್ಡೊ ಡೈ ಕ್ಯಾಪ್ರಿಯೊ ನಟನೆಯ ಒನ್ ಬ್ಯಾಟಲ್ ಆಫ್ಟರ್ ಅನದರ್ ಚಿತ್ರ ಭಾಜನವಾಗಿದೆ. ಈ ಚಿತ್ರ ೧೩ ನಾಮನಿರ್ದೇಶನಗಳನ್ನು ಕಂಡು ಒಟ್ಟು ೬ ಪ್ರಶಸ್ತಿ ಗೆದ್ದಿತು. ಪೌ ಥಾಮಸ್ ಆಂಡ್ರಸನ್ ಇದೇ ಚಿತ್ರಕ್ಕಾಗಿ ಅತ್ಯುತ್ತಮ ನಿರ್ದೇಶಕ ಪ್ರಶಸ್ತಿ ಪಡೆದರು. ಇನ್ನು ಹ್ಯಾಮ್ನೆಟ್ ಚಲನಚಿತ್ರದ ನಟನೆಗಾಗಿ ಜೆಸ್ಸಿ ಬಕ್ಲೆ ಅತ್ಯುತ್ತಮ ನಟಿ ಪ್ರಶಸ್ತಿ ಪಡೆದರು. ಸಮಾರಂಭದಲ್ಲಿ ಕಳೆದೊಂದು ವರ್ಷದಲ್ಲಿ ನಿಧನರಾದ ರಾಬರ್ಟ್ ರೆಡ್‌ಫೋರ್ಡ್, ರಾಬ್ ರೇನರ್, ದಯಾನ್ ಕೀಟನ್ ಸೇರಿದಂತೆ ಚಲನಚಿತ್ರ ಕ್ಷೇತ್ರಕ್ಕೆ ಕೊಡುಗೆ ನೀಡಿದ ಮಹನೀಯರಿಗೆ ಗೌರವ ನಮನ ಸಲ್ಲಿಸಲಾಯಿತು.

<>><><*><><<>

ಜಮ್ಮು-ಕಾಶ್ಮೀರದ ಎತ್ತರದ ಸಿಂಥಾನ್ ಪಾಸ್‌ನಲ್ಲಿ ತೀವ್ರ ಹಿಮಪಾತದ ನಡುವೆ ಸಿಲುಕಿದ್ದ ೨೧೪ ಪ್ರಯಾಣಿಕರು ಮತ್ತು ಸ್ಥಳೀಯ ನಿವಾಸಿಗಳನ್ನು ಭಾರತೀಯ ಸೇನೆ ಮತ್ತು ಜಮ್ಮು-ಕಾಶ್ಮೀರ ಪೊಲೀಸ್ ಜಂಟಿ ತಂಡ ಯಶಸ್ವಿಯಾಗಿ ಸ್ಥಳಾಂತರಿಸಿದೆ. ಕಣಿವೆಯಿಂದ ಜಮ್ಮು ಕಾಶ್ಮೀರದ ಕಿಶ್ತ್ವಾರ್ ಜಿಲ್ಲೆಯೊಂದಿಗೆ ಸಂಪರ್ಕಿಸುವ ಈ ಮಾರ್ಗದಲ್ಲಿ ಹವಾಮಾನ ವೈಪರೀತ್ಯದಿಂದಾಗಿ ಸಂಚಾರ ಸ್ಥಗಿತಗೊಂಡಿತ್ತು. ಕಠಿಣ ಹವಾಮಾನ ಪರಿಸ್ಥಿತಿ ಮತ್ತು ಅಪಾಯಕಾರಿ ರಸ್ತೆಯ ನಡುವೆಯೂ ಸಿಬ್ಬಂದಿ ಸಂತ್ರಸ್ತರನ್ನು ಸುರಕ್ಷಿತವಾಗಿ ಸ್ಥಳಾಂತರಿಸುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ ><><<>**